**Akashvani : Bangalore**
**National Bulletins In Kannada**
**02.10.2025 / 19.35 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**02.10.2025 / 19.35 pm**

**<><*<><>*><>**

ಮುಖ್ಯಾಂಶಗಳು

೧. ವಿಶ್ವವಿಖ್ಯಾತ ಮೈಸೂರು ದಸರಾ: ೬ನೇ ಬಾರಿ ಕ್ಯಾಪ್ಟನ್ ಅಭಿಮನ್ಯು ನೇತೃತ್ವದಲ್ಲಿ ಜಂಬೂ ಸವಾರಿ ಯಶಸ್ವಿ

೨. ಎಲೆಕ್ಟ್ರಾನಿಕ್ಸ್ ಘಟಕಗಳ ಉತ್ಪಾದನಾ ಯೋಜನೆ ಅಡಿಯಲ್ಲಿ ೧ ಲಕ್ಷ ೧೫ ಸಾವಿರದ ೩೫೧ ಕೋಟಿ ರೂಪಾಯಿಗಳ ಹೂಡಿಕೆ ಅರ್ಜಿಗಳನ್ನು ಸ್ವೀಕರಿಸಿದ ಕೇಂದ್ರ ಸರ್ಕಾರ

೩. ವನ್ಯಜೀವಿ ಸಪ್ತಾಹ ೨೦೨೫ರ ಹಿನ್ನೆಲೆ, ನಮೋ ವನ್ ಶಿಲಾನ್ಯಾಸ ನೆರವೇರಿಸಿದ ಕೇಂದ್ರ ಸಚಿವ ಭೂಪೇಂದ್ರ ಯಾದವ್

೪. ಭಾರತ - ವೆಸ್ಟ್ ಇಂಡೀಸ್ ನಡುವಿನ ಟೆಸ್ಟ್ ಪಂದ್ಯ: ಮೊದಲ ದಿನದಾಟದ ಅಂತ್ಯಕ್ಕೆ ೧೨೧ ರನ್ ಗಳಿಸಿರುವ ಭಾರತ

****************

ವಿಶ್ವವಿಖ್ಯಾತ, ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಹಿನ್ನೆಲೆಯಲ್ಲಿ ಅರಮನೆ ಆವರಣದಲ್ಲಿ ಜಂಬೂಸವಾರಿಗೆ ಪುಷ್ಪಾರ್ಚನೆ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದ್ದಾರೆ. ೬ನೇ ಬಾರಿ ಚಿನ್ನದ ಅಂಬಾರಿ ಹೊತ್ತು ಕ್ಯಾಪ್ಟನ್ ಅಭಿಮನ್ಯು ಸಾಗಿದ್ದು, ಮಾವುತ ವಸಂತ ಆನೆಯನ್ನ ಮುನ್ನಡೆಸಿದ್ದಾರೆ. ಅಭಿಮನ್ಯುವಿನೊಂದಿಗೆ ಕುಮ್ಕಿ ಆನೆಗಳಾದ ಕಾವೇರಿ ಮತ್ತು ರೂಪಾ ಹೆಜ್ಜೆ ಹಾಕಿವೆ. ಜಂಬೂ ಸವಾರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದ ವೇಳೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್. ಸಿ. ಮಹದೇವಪ್ಪ, ಕನ್ನಡ & ಸಂಸ್ಕೃತಿ ಖಾತೆ ಸಚಿವ ಶಿವರಾಜ ತಂಗಡಗಿ, ಉಪಸ್ಥಿತರಿದ್ದರು. ಆರನೇ ಬಾರಿಗೆ ಕ್ಯಾಪ್ಟನ್ ಅಭಿಮನ್ಯು ೭೫೦ ಕೆ.ಜಿ. ತೂಕದ ಅಂಬಾರಿ ಹೊತ್ತು ಬನ್ನಿ ಮಂಟಪದವರೆಗೆ ಹೆಜ್ಜೆ ಹಾಕಿದ್ದಾನೆ.

ಈ ಬಾರಿ ಮೆರವಣಿಗೆಯಲ್ಲಿ ೫೮ ಸ್ತಬ್ಧ ಚಿತ್ರಗಳು ೧೨೫ಕ್ಕೂ ಹೆಚ್ಚು ಕಲಾತಂಡಗಳು ೧೪ ಆನೆಗಳು ಅಶ್ವಾರೋಹಿ ಪಡೆಗಳು ಭಾಗವಹಿಸಿವೆ. ದಸರಾ ಜಂಬೂಸವಾರಿ ವೀಕ್ಷಿಸಲು ಅರಮನೆ ಅಂಗಳದಲ್ಲಿ ೪೮ ಸಾವಿರ ಆಸನಗಳ ವ್ಯವಸ್ಥೆ ಮಾಡಲಾಗಿತ್ತು. ಅರಮನೆಯ ಉತ್ತರ ದ್ವಾರದ ಮೂಲಕ ತೆರಳಿದ ಜಂಬೂಸವಾರಿ ಮೆರವಣಿಗೆ ಕೆ.ಆರ್ ಸರ್ಕಲ್, ಸಯ್ಯಾಜಿರಾವ್ ರಸ್ತೆ, ಸರ್ಕಾರಿ ಆಯುರ್ವೇದ ಸರ್ಕಲ್, ಬಂಬೂ ಬಜಾರ್, ಹೈವೇ ಸರ್ಕಲ್ ಮೂಲಕ ಸಾಗಿ ಸಂಜೆ ವೇಳೆಗೆ ಬನ್ನಿಮಂಟಪ ಪಂಜಿನ ಕವಾಯತು ಮೈದಾನ ತಲುಪಿತು. ಜಂಬೂಸವಾರಿ ಮುಗಿದ ಬಳಿಕ ೭ ಗಂಟೆ ನಂತರ ಬನ್ನಿ ಮಂಟಪ ಮೈದಾನದಲ್ಲಿ ಪಂಜಿನ ಕವಾಯತು ಆಯೋಜಿಸಲಾಗಿದೆ. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕವಾಯತು ವೀಕ್ಷಿಸಿ ಗೌರವ ವಂದನೆ ಸ್ವೀಕರಿಸಲಿದ್ದಾರೆ.

****************

ಎಲೆಕ್ಟ್ರಾನಿಕ್ಸ್ ಘಟಕಗಳ ಉತ್ಪಾದನಾ ಯೋಜನೆ ಅಡಿಯಲ್ಲಿ ಸರ್ಕಾರವು ಒಂದು ಲಕ್ಷ ೧೫ ಸಾವಿರದ ೩೫೧ ಕೋಟಿ ರೂಪಾಯಿಗಳ ಹೂಡಿಕೆ ಅರ್ಜಿಗಳನ್ನು ಸ್ವೀಕರಿಸಿದೆ ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಇಂದು ಹೇಳಿದ್ದಾರೆ. ನವದೆಹಲಿಯಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ ಸಚಿವ ಅಶ್ವಿನಿ ವೈಷ್ಣವ್, ಈ ಯೋಜನೆಯಡಿ ಅರ್ಜಿ ಸಲ್ಲಿಸುವ ದಿನಾಂಕ ನಿನ್ನೆ ಮುಕ್ತಾಯಗೊಂಡಿದ್ದು, ಅತಿಹೆಚ್ಚು ಸಂಖ್ಯೆಯಲ್ಲಿ ಅರ್ಜಿಗಳು ಸಲ್ಲಿಕೆಯಾಗಿವೆ ಎಂದು ತಿಳಿಸಿದರು. ೫೯ ಸಾವಿರದ ೩೫೦ ಕೋಟಿ ರೂಪಾಯಿಗಳ ಹೂಡಿಕೆಯ ಗುರಿಯ ಹಿನ್ನೆಲೆಯಲ್ಲಿ, ಒಂದು ಲಕ್ಷ ೧೫ ಸಾವಿರಕ್ಕೂ ಹೆಚ್ಚು ಮೌಲ್ಯದ ಅರ್ಜಿಗಳನ್ನು ಸ್ವೀಕರಿಸಲಾಗಿದೆ. ಇದಲ್ಲದೆ, ೪ ಲಕ್ಷ ೫೭ ಸಾವಿರದ ೫೦೦ ಕೋಟಿ ರೂಪಾಯಿಗಳ ಉತ್ಪಾದನಾ ಗುರಿಯ ನಡುವೆ, ೧೦ ಲಕ್ಷ ಕೋಟಿ ರೂಪಾಯಿಗಳಿಗೂ ಹೆಚ್ಚು ಉತ್ಪಾದನಾ ಅಂದಾಜುಗಳನ್ನು ಸ್ವೀಕರಿಸಲಾಗಿದೆ ಎಂದು ಕೇಂದ್ರ ಸಚಿವರು ಮಾಹಿತಿ ನೀಡಿದರು.

****************

ಸೇವೆ ಮತ್ತು ಸುಶಾಸನ, ಅಂದರೆ ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಮಂತ್ರದಿಂದ ಮಾರ್ಗದರ್ಶಿಸಲ್ಪಟ್ಟ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಸರ್ಕಾರವು, ದೇಶದಲ್ಲಿ

ಪ್ರಗತಿ ಮತ್ತು ಪರಿವರ್ತನೆಯನ್ನು ತರಲು ಅವಿಶ್ರಾಂತವಾಗಿ ಶ್ರಮಿಸುತ್ತಿದೆ. ಇಂದಿನ ಭಾರತವನ್ನು ಶಾಂತಿಪ್ರಿಯ ರಾಷ್ಟ್ರವಾಗಿ ಮಾತ್ರವಲ್ಲದೆ, ಬಲವಾದ, ನಿರ್ಣಾಯಕ ಮತ್ತು ತಾಂತ್ರಿಕವಾಗಿ ಸ್ವಾವಲಂಬಿ, ಜಾಗತಿಕ ಶಕ್ತಿಯಾಗಿಯೂ ನೋಡಲಾಗುತ್ತಿದೆ. ಜಾಗತಿಕ ವೇದಿಕೆಯಲ್ಲಿ ಭಾರತದ ಬದಲಾಗುತ್ತಿರುವ ಚಿತ್ರಣವನ್ನು ಆಪರೇಷನ್ ಸಿಂಧೂರ್ ಮತ್ತಷ್ಟು ಒತ್ತಿಹೇಳುತ್ತವೆ. ಏಪ್ರಿಲ್ ೨೨ ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ, ಭಾರತವು ಮೇ ೬ ಮತ್ತು ೭ ರ ಮಧ್ಯರಾತ್ರಿಯಲ್ಲಿ ಆಪರೇಷನ್ ಸಿಂಧೂರ್ ಅನ್ನು ಪ್ರಾರಂಭಿಸಿತು. ಪ್ರತ್ಯುತ್ತರವಾಗಿ ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಾದ್ಯಂತ ಒಂಬತ್ತು ಭಯೋತ್ಪಾದಕ ಅಡಗುತಾಣಗಳನ್ನು ತಟಸ್ಥಗೊಳಿಸಲಾಯಿತು. ಭಾರತ ಅಗತ್ಯವಿದ್ದಾಗ ತ್ವರಿತವಾಗಿ ಮತ್ತು ನಿಖರವಾಗಿ ಕಾರ್ಯನಿರ್ವಹಿಸುತ್ತದೆ ಎಂಬ ಸಂದೇಶ ಸ್ಪಷ್ಟವಾಗಿತ್ತು. ಪ್ರಧಾನಿ ನರೇಂದ್ರ ಮೋದಿ ಹೇಳಿದಂತೆ, ಆಪರೇಷನ್ ಸಿಂಧೂರ್ ಮುಗಿದಿಲ್ಲ, ಅದನ್ನು ಈಗ ವಿರಾಮಗೊಳಿಸಲಾಗುತ್ತಿದೆ.

****************

ಕೇಂದ್ರ ಪರಿಸರ ಸಚಿವ ಭೂಪೇಂದ್ರ ಯಾದವ್ ಹರಿಯಾಣದ ಮಾನೆಸರ್‌ನಲ್ಲಿ, ವನ್ಯಜೀವಿ ಸಪ್ತಾಹ ೨೦೨೫ರ ಹಿನ್ನೆಲೆ, ನಮೋ ವನ್‌ನ ಶಿಲಾನ್ಯಾಸ ಕಾರ್ಯಕ್ರಮ ನೆರವೇರಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಪ್ರತಿಕ್ರಿಯಿಸಿದ ಅವರು, ಭಾರತದ ಜೀವವೈವಿಧ್ಯತೆಯನ್ನು ಸಂರಕ್ಷಿಸುವ ಮಹತ್ವವನ್ನು ಉತ್ತೇಜಿಸಿದರು ದೇಶದ ಸಸ್ಯ ಹಾಗೂ ಪ್ರಾಣಿ ಸಂಕುಲಗಳ ರಕ್ಷಣೆಯ ಕುರಿತು ಜನರಲ್ಲಿ ಅರಿವು ಮೂಡಿಸುವುದು ಮತ್ತು ಅದನ್ನು ಪ್ರತಿ ನಾಗರಿಕನಿಗೂ ತಲುಪಿಸುವುದು . ವನ್ಯಜೀವಿ ಸಪ್ತಾಹದ ಉದ್ದೇಶವಾಗಿದೆ ಎಂದರು. ಪ್ರತಿ ವರ್ಷ ಅಕ್ಟೋಬರ್ ೨ ರಿಂದ ೮ ರವರೆಗೆ ವನ್ಯಜೀವಿ ಸಪ್ತಾಹವನ್ನು ಆಚರಿಸಲಾಗುತ್ತದೆ. ಈ ಆಚರಣೆಯ ಮೂಲಕ ವನ್ಯಜೀವಿ ಸಂರಕ್ಷಣೆಯ ಅಗತ್ಯ ಮತ್ತು ಪರಿಸರ ಸಮತೋಲನದ ಬಗ್ಗೆ ಸಾರ್ವಜನಿಕ ಜಾಗೃತಿ ಹೆಚ್ಚಿಸುವ ಉದ್ದೇಶವನ್ನು ಹೊಂದಿದೆ. ಈ ವರ್ಷದ ವನ್ಯಜೀವಿ ವಾರವನ್ನು "ಸೇವಾ ಪರ್ವ" ಎಂಬ ಧ್ಯೇಯದಡಿ ಆಯೋಜಿಸಲಾಗಿದ್ದು, ಪ್ರಕೃತಿಯತ್ತ ಸೇವಾ ಮನೋಭಾವನೆ ಮತ್ತು ಜವಾಬ್ದಾರಿಯನ್ನು ಇದು ಮೂಡಿಸುತ್ತದೆ.

****************

ಮಹಾತ್ಮಾ ಗಾಂಧೀಜಿಯವರ ಜನ್ಮಜಯಂತಿಯ ಸಂದರ್ಭದಲ್ಲಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ನವದೆಹಲಿಯ ಖಾದಿ ಗ್ರಾಮೋದ್ಯೋಗ ಭವನದಲ್ಲಿ ಜಿಎಸ್‌ಟಿ ಬಚತ್ ಉತ್ಸವದ ಅಡಿಯಲ್ಲಿ ಆಯೋಜಿಸಲಾಗಿದ್ದ ಖಾದಿ ಮತ್ತು ಗ್ರಾಮೋದ್ಯೋಗ ಉತ್ಪನ್ನಗಳ ಮೇಲೆ ರಾಷ್ಟ್ರಮಟ್ಟದ ರಿಯಾಯಿತಿ ಮಾರಾಟಕ್ಕೆ ಚಾಲನೆ ನೀಡಿದರು. ಇಂದಿನಿಂದ ನವೆಂಬರ್ ೫ರ ತನಕ, ಖಾದಿ ಮಹೋತ್ಸವ ೨೦೨೫ರ ಸಂದರ್ಭದಲ್ಲಿ, ಖಾದಿ ಉಡುಪುಗಳ ಮೇಲೆ ಗ್ರಾಹಕರಿಗೆ ಶೇಕಡಾ. ೨೦ ಹಾಗೂ ಖಾದಿ ಗ್ರಾಮೋದ್ಯೋಗ ಉತ್ಪನ್ನಗಳ ಮೇಲೆ ಶೇಕಡಾ. ೧೦ರಷ್ಟು ರಿಯಾಯಿತಿ ಲಭ್ಯವಾಗಲಿದೆ. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಅಮಿತ್ ಶಾ, ದೇಶದ ಜನತೆಯಲ್ಲಿ ಖಾದಿಯ ಬಳಕೆಯನ್ನು ಉತ್ತೇಜಿಸಲು ಮತ್ತು ಸ್ವದೇಶಿ ಉತ್ಪನ್ನಗಳನ್ನು ಅಂಗೀಕರಿಸುವ ಅಭಿಯಾನವನ್ನು ಉತ್ತೇಜಿಸಲು ಕರೆ ನೀಡಿದರು. "ಮೇಕ್ ಇನ್ ಇಂಡಿಯಾ" ಉತ್ಪನ್ನಗಳನ್ನು ಉತ್ತೇಜಿಸುವಂತೆ ನಾಗರಿಕರು ಮತ್ತು ವ್ಯಾಪಾರಸ್ಥರಿಗೆ ಮನವಿ ಮಾಡಿದ ಅವರು, ಪ್ರತಿವರ್ಷ ಕನಿಷ್ಠ ಐದು ಸಾವಿರ ರೂಪಾಯಿಗಳಷ್ಟು ಖಾದಿ ಉಡುಪುಗಳನ್ನು ಖರೀದಿಸುವಂತೆ ಮನವಿ ಮಾಡಿದರು.

*****************

ಮಹಾತ್ಮ ಗಾಂಧೀಜಿಯವರ ಆದರ್ಶಗಳು ಮತ್ತು ಮೌಲ್ಯಗಳನ್ನು ನಿತ್ಯಜೀವನದಲ್ಲಿ ಅಳವಡಿಸಿಕೊಳ್ಳುವ ಅಗತ್ಯವನ್ನು, ಕೇಂದ್ರ ಆಯುಷ್ ಖಾತೆ ರಾಜ್ಯ ಸಚಿವ ಪ್ರತಾಪರಾವ್ ಜಾಧವ್ ಒತ್ತಿಹೇಳಿದ್ದಾರೆ. ಪುಣೆಯ ರಾಷ್ಟ್ರೀಯ ನ್ಯಾಚುರೋಪಥಿ ಸಂಸ್ಥೆಯಲ್ಲಿ ಇಂದು ಗಾಂಧೀ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗಾಂಧೀಜಿ ಜಗತ್ತಿನಾದ್ಯಂತ ಸತ್ಯ, ಶಾಂತಿ, ಅಹಿಂಸೆ ಮತ್ತು ದೃಢನಿಶ್ಚಯಕ್ಕೆ ಪ್ರಸಿದ್ಧರಾಗಿದ್ದು, ಅವರ ಜೀವನ ಅನೇಕ ತಲೆಮಾರಿಗೆ ಪ್ರೇರಣೆಯಾಗಿದೆ ಎಂದರು. ಇದೇ ಸಂದರ್ಭದಲ್ಲಿ 'ಮಹಾತ್ಮ ಗಾಂಧಿ ವೆಬ್‌ಥಾನ್' ಎಂಬ ಶೀರ್ಷಿಕೆಯ ಪುಸ್ತಕವನ್ನು ಸಚಿವ ಜಾಧವ್ ಬಿಡುಗಡೆ ಮಾಡಿದರು.

*****************

ಪಾಕಿಸ್ತಾನ ಆಕ್ರಮಿತ ಜಮ್ಮು ಮತ್ತು ಕಾಶ್ಮೀರದಲ್ಲಿ ಇಂದು ಹಿಂಸಾತ್ಮಕ ಘರ್ಷಣೆಗಳು ಮುಂದುವರೆದಿದ್ದು, ಮೂವರು ಪೊಲೀಸರು ಸೇರಿದಂತೆ ಒಂಬತ್ತು ಜನರು ಸಾವನ್ನಪ್ಪಿದ್ದಾರೆ ಎಂದು ಸ್ಥಳೀಯ ಮಾಧ್ಯಮ ವರದಿಗಳು ತಿಳಿಸಿವೆ. ಕಳೆದ ಮೂರು ದಿನಗಳ ತೀವ್ರ ಪ್ರತಿಭಟನೆಗಳಲ್ಲಿ ಸಾವಿನ ಸಂಖ್ಯೆ ಕನಿಷ್ಠ ೨೧ ಕ್ಕೆ ತಲುಪಿದೆ. ಜಂಟಿ ಅವಾಮಿ ಕ್ರಿಯಾ ಸಮಿತಿ ಸಂಘಟನೆಯ ಕೇಂದ್ರ ನಾಯಕ ಶೌಕತ್ ನವಾಜ್ ಮಿರ್ ಅವರು ಈ ಪ್ರದೇಶದಲ್ಲಿ ಸುಧಾರಣೆಗಳು ಮತ್ತು ಸಾರ್ವಜನಿಕ ಸೌಲಭ್ಯಗಳಿಗಾಗಿ ನೀಡಿದ ಮುಷ್ಕರಕ್ಕೆ ಕರೆ ನೀಡಿದ ನಂತರ ಮುಜಫರಾಬಾದ್, ಮೀರ್‌ಪುರ್, ಪೂಂಚ್, ನೀಲಂ, ಭಿಂಬರ್ ಮತ್ತು ಪಲಾಂದ್ರಿ ಪ್ರದೇಶಗಳು ಸ್ತಬ್ಧಗೊಂಡಿವೆ.

*****************

ಭಾರತೀಯ ಹವಾಮಾನ ಇಲಾಖೆ ಇಂದು ದಕ್ಷಿಣ ಛತ್ತೀಸ್‌ಗಢ, ಒಡಿಶಾ ಮತ್ತು ಉತ್ತರ ಕರಾವಳಿ ಆಂಧ್ರಪ್ರದೇಶದ ಪ್ರತ್ಯೇಕ ಸ್ಥಳಗಳಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆ ನೀಡಿದೆ. ತಮಿಳುನಾಡು, ಅಸ್ಸಾಂ ಮತ್ತು ಮೇಘಾಲಯದಲ್ಲಿ ನಾಳೆ ಭಾರೀ ಮಳೆಯಾಗುವ ಸಂಭವವಿದ್ದು, ಅಕ್ಟೋಬರ್ ೫ ರಿಂದ ೭ ರವರೆಗೆ ವಾಯುವ್ಯ ಭಾರತದಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಈಶಾನ್ಯ ಅರೇಬಿಯನ್ ಸಮುದ್ರ, ವಾಯುವ್ಯ ಅರೇಬಿಯನ್ ಸಮುದ್ರದ ಆಸುಪಾಸಿನ ಪ್ರದೇಶಗಳು ಮತ್ತು ಉತ್ತರ ಗುಜರಾತ್ ಕರಾವಳಿಯಲ್ಲಿ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಹವಾಮಾಣ ಇಲಾಖೆ ಸೂಚನೆ ನೀಡಿದೆ.

*****************

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಎರಡು ಪಂದ್ಯಗಳ ಕ್ರಿಕೆಟ್ ಸರಣಿಯ ಮೊದಲ ಟೆಸ್ಟ್ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ವಿರುದ್ಧದ ಮೊದಲ ದಿನದಾಟದ ಅಂತ್ಯಕ್ಕೆ ಭಾರತ ಎರಡು ವಿಕೆಟ್ ನಷ್ಟಕ್ಕೆ ೧೨೧ ರನ್ ಗಳಿಸಿದೆ. ಕೆ.ಎಲ್. ರಾಹುಲ್ ೫೩ ರನ್ ಮತ್ತು ಶುಭ್‌ಮನ್ ಗಿಲ್ ೧೮ ರನ್ ಗಳಿಸಿ ಕ್ರೀಸ್‌ನಲ್ಲಿದ್ದಾರೆ. ಯಶಸ್ವಿ ಜೈಸ್ವಾಲ್ ೩೬ ರನ್, ಸಾಯಿ ಸುದರ್ಶನ್ ೭ ರನ್ ಗಳಿಸಿ ಔಟಾಗಿದ್ದಾರೆ. ಇದಕ್ಕೂ ಮೊದಲು ಬ್ಯಾಟಿಂಗ್ ಮಾಡಿದ ವೆಸ್ಟ್ ಇಂಡೀಸ್ ೧೬೨ ರನ್‌ಗಳಿಗೆ ಆಲೌಟ್ ಆಗಿತ್ತು. ಆತಿಥೇಯ ಭಾರತ-ವೆಸ್ಟ್ ಇಂಡೀಸ್ ನಡುವಿನ

ಎರಡು ಪಂದ್ಯಗಳ ಟೆಸ್ಟ್ ಸರಣಿಯು, ಹೊಸ ನಾಯಕ ಶುಭ್‌ಮನ್ ಗಿಲ್ ನೇತೃತ್ವದಲ್ಲಿ ಭಾರತದ ತವರು ಋತುವಿನ ಆರಂಭವನ್ನು ಸೂಚಿಸುತ್ತದೆ.

****************

ನವದೆಹಲಿಯಲ್ಲಿ ನಡೆಯುತ್ತಿರುವ, ಇಂಡಿಯನ್ ಆಯಿಲ್ ೨೦೨೫, ವಿಶ್ವ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಮಹಿಳೆಯರ ೧೦೦ ಮೀಟರ್ ಟಿ-೩೬ ವಿಭಾಗದ ಫೈನಲ್‌ನಲ್ಲಿ ಚೀನಾದ ಪ್ಯಾರಾಲಿಂಪಿಕ್ ಚಾಂಪಿಯನ್ ವೆನ್ ಕ್ಸಿಯಾಯೋಯನ್ ಚಿನ್ನ ಗೆದ್ದಿದ್ದಾರೆ.

ಸ್ಪರ್ಧೆಯ ನಂತರ, ನಿನ್ನೆ ಟ್ರ್ಯಾಕ್‌ನಿಂದ ಹೊರಗೆ ಅವರು ಆಡಿದ ಮಾತುಗಳು ಚಿನ್ನಕ್ಕಿಂತಲೂ ಮೌಲ್ಯಯುತವಾಗಿದ್ದವು.

****************

ನೌಕರರ ರಾಜ್ಯ ವಿಮಾ ನಿಗಮ-ಇಎಸ್‌ಐಸಿಯು ನ್ಯಾಯಾಲಯದಲ್ಲಿ ನಡೆಯುತ್ತಿರುವ ಪ್ರಕರಣಗಳ ಪರಿಹಾರ ಹಾಗೂ ಅಪರಾಧ ಪ್ರಕರಣಗಳ ಹಿಂಪಡೆಯಲು ಹೊಸ ಕ್ಷಮಾ ಯೋಜನೆ ೨೦೨೫ಕ್ಕಾಗಿ ವಿವರವಾದ ಮಾರ್ಗಸೂಚಿಗಳನ್ನು ಪ್ರಕಟಿಸಿದೆ. ಆಧಿಕೃತ ಪ್ರಕಟಣೆಯ ಪ್ರಕಾರ, ಈ ಕ್ಷಮಾ ಯೋಜನೆ ೨೦೨೫, ಒಂದು ಬಾರಿ ಮಾತ್ರ ಅನ್ವಯವಾಗುವ ವಿವಾದ ಪರಿಹಾರ ಉದ್ದಿಮೆಯಾಗಿದೆ. ಇದರ ಮೂಲಕ ನ್ಯಾಯಾಲಯದ ಪ್ರಕರಣಗಳ ಸಂಗ್ರಹವನ್ನು ಕಡಿಮೆ ಮಾಡುವುದು, ಕಾಯ್ದೆಯಡಿ ನಿಯಮಾನುಸರಣೆಯನ್ನು ಉತ್ತೇಜಿಸುವುದು ಹಾಗೂ ವ್ಯವಹಾರ ಸುಲಭಗೊಳಿಸುವುದು ಮುಖ್ಯ ಉದ್ದೇಶವಾಗಿದೆ.

****************